ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
ಹನ್ನೆರಡನೇ ಅಧಿವೇಶನ
ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 1ನೇ ಡಿಸೆಂಬರ್, 2016
(ಸಮಯ ಬೆಳಗ್ಗೆ : 10.30 ಗಂಟೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂಬತ್ತನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂಬತ್ತನೇ ಪಟ್ಟಿ

2. ವರದಿಯನ್ನೊಪ್ಪಿಸುವುದು

ಶ್ರೀ ಎನ್.ಹೆಚ್. ಶಿವಶಂಕರ ರೆಡ್ಡಿ (ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಖಾಸಗಿ ಸದಸ್ಯರುಗಳ ವಿಧೇಯಕ ಮತ್ತು ನಿರ್ಣಯಗಳ ಸಮಿತಿ) ಅವರು – 2016-17ನೇ ಸಾಲಿನ ಖಾಸಗಿ ಸದಸ್ಯರುಗಳ ವಿಧೇಯಕ ಹಾಗೂ ನಿರ್ಣಯಗಳ ಸಮಿತಿಯ 11ನೇ ವರದಿಯನ್ನೊಪ್ಪಿಸುವುದು.

3. ಮಹದಾಯಿ ಕಳಸಾ ಬಂಡೂರಿ ನಾಲಾ ಯೋಜನೆ ಕುರಿತು ಮುಂದುವರೆದ ವಿಶೇಷ ಚರ್ಚೆ ಹಾಗೂ ಸರ್ಕಾರದ ಉತ್ತರ

4. ವಿತ್ತೀಯ ಕಾರ್ಯಕಲಾಪಗಳು

2016-17ನೇ ಸಾಲಿನ ಪೂರಕ ಅಂದಾಜುಗಳ (2ನೇ ಕಂತು) ಮೇಲೆ ಚರ್ಚೆ, ಸರ್ಕಾರದ ಉತ್ತರ ಮತ್ತು ಮತಕ್ಕೆ ಹಾಕುವುದು.

5. ಶಾಸನ ರಚನೆ

I. ವಿಧೇಯಕವನ್ನು ಹಿಂಪಡೆಯುವುದು

ಶ್ರೀ ಕೃಷ್ಣ ಭೈರೇಗೌಡ (ಕೃಷಿ ಸಚಿವರು)ಅವರು:–

2015ನೇ ಸಾಲಿನ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಕೃಷಿ ಇಲಾಖೆ ಅಧಿಕಾರಿಗಳು ಮತ್ತು ಇತರೆ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ವಿಧೇಯಕವನ್ನು ಹಿಂಪಡೆಯಲು ಅನುಮತಿ ಕೋರುವುದು.

II. ವಿಧೇಯಕಗಳನ್ನು ಮಂಡಿಸುವುದು.

1. **ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು) ಅವರು:–**

   ಅ) 2016ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ಸಂಖ್ಯೆ:4) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.

   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

2. **ಶ್ರೀ ಕೆ.ಜೆ. ಜಾರ್ಜ್ (ಮಾನ್ಯ ಬೆಂಗಳೂರು ಅಭಿವೃದ್ಧಿ ಹಾಗೂ ನಗರ ಯೋಜನಾ ಸಚಿವರು) ಅವರು:–**

   ಅ) 2016ನೇ ಸಾಲಿನ ಕರ್ನಾಟಕ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ (2ನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.

   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

3. **ಶ್ರೀ ಬಿ. ರಮಾನಾಥ ರೈ (ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು) ಅವರು:–**

   ಅ) 2016ನೇ ಸಾಲಿನ ಕರ್ನಾಟಕ ಮರಗಳ ಸಂರಕ್ಷಣೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.

   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

....3

III. ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1. **ಶ್ರೀ ಸಿದ್ಧರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು) ಅವರು:-**
   ಅ) 2016ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ಸಂಖ್ಯೆ:4) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.
   ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.
2. **ಶ್ರೀ ಕೆ.ಆರ್. ರಮೇಶ್ ಕುಮಾರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)ಅವರು:-**
   ಅ) 2016ನೇ ಸಾಲಿನ ಕರ್ನಾಟಕ ಆಯುರ್ವೇದ, ಪ್ರಕೃತಿ ಚಿಕಿತ್ಸೆ, ಸಿದ್ಧ, ಯುನಾನಿ ಮತ್ತು ಯೋಗ ವೈದ್ಯ ವೃತ್ತಿ ನಿರತರ ನೋಂದಣಿ ಮತ್ತು ವೈದ್ಯಕೀಯ ವೃತ್ತಿನಿರತರ ಸಂಕೀರ್ಣ ಉಪಬಂಧಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.
   ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.
3. **ಶ್ರೀ ಕೆ.ಆರ್. ರಮೇಶ್ ಕುಮಾರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)ಅವರು:-**
   ಅ) 2016ನೇ ಸಾಲಿನ ಕರ್ನಾಟಕ ಜೀವರಕ್ಷಕ ಮತ್ತು ವೈದ್ಯಕೀಯ ವೃತ್ತಿನಿರತರ (ತುರ್ತು ಸನ್ನಿವೇಶಗಳಲ್ಲಿ ರಕ್ಷಣೆ ಮತ್ತು ನಿಯಂತ್ರಣ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.
   ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.
4. **ಶ್ರೀ ಕಾಗೋಡು ತಿಮ್ಮಪ್ಪ (ಮಾನ್ಯ ಕಂದಾಯ ಸಚಿವರು) ಅವರು:-**
   ಅ) 2016ನೇ ಸಾಲಿನ ಕರ್ನಾಟಕ ಭೂ ಸುಧಾರಣೆಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.
   ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.
5. **ಶ್ರೀ ಹೆಚ್.ವೈ. ಮೇಟಿ (ಮಾನ್ಯ ಅಬಕಾರಿ ಸಚಿವರು) ಅವರು:-**
   ಅ) 2016ನೇ ಸಾಲಿನ ಕರ್ನಾಟಕ ಅಬಕಾರಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.
   ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

....4

6. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. **ಶ್ರೀಯುತರುಗಳಾದ ಜಗದೀಶ್ ಶೆಟ್ಟರ್, ಆರ್. ಅಶೋಕ, ವಿಶ್ವೇಶ್ವರ ಹೆಗಡೆ ಕಾಗೇರಿ, ಕೆ.ಜಿ. ಬೋಪಯ್ಯ, ಎಸ್. ಸುರೇಶ್ ಕುಮಾರ್ ಮತ್ತು ಇತರರು** – ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿರುವ ವಿಷಯದ ಬಗ್ಗೆ ನಡೆದ ಚರ್ಚೆಗೆ **ಸರ್ಕಾರದ ಉತ್ತರ**.

2. **ಶ್ರೀಯುತರುಗಳಾದ ಹೆಚ್.ಡಿ.ಕುಮಾರಸ್ವಾಮಿ, ಹೆಚ್.ಡಿ. ರೇವಣ್ಣ, ಜಿ.ಟಿ. ದೇವೇಗೌಡ, ಕೆ.ಎಂ.ಶಿವಲಿಂಗೇಗೌಡ ಮತ್ತು ಎನ್.ಹೆಚ್.ಕೋನರಡ್ಡಿ ಮತ್ತು ಇತರರು** ಕೇಂದ್ರ ಸರ್ಕಾರವು ಬಹುರಾಷ್ಟ್ರೀಯ ಕಂಪನಿಗಳು ಹಾಗೂ ಕಾರ್ಪೋರೇಟ್ ಸಂಸ್ಥೆಗಳಿಗೆ ಸಾಲ ಮನ್ನಾ ಮಾಡಿರುವಂತೆಯೇ ರೈತರ ರಾಷ್ಟ್ರೀಕೃತ ಬ್ಯಾಂಕ್ ಹಾಗೂ ಸಹಕಾರ ಬ್ಯಾಂಕ್‌ಗಳಲ್ಲಿ ಪಡೆದಿರುವ ಸಾಲವನ್ನು ಮನ್ನಾ ಮಾಡುವ ಬಗ್ಗೆ ಹಾಗೂ ಕೇಂದ್ರ ಸರ್ಕಾರ ಮತ್ತು ಭಾರತೀಯ ರಿಜರ್ವ್ ಬ್ಯಾಂಕಿನ ದಿನಾಂಕ: 14.11.2016ರ ಆದೇಶವನ್ನು ರೈತರಿಗೆ ಅನುಕೂಲವಾಗುವ ರೀತಿಯಲ್ಲಿ ಮಾರ್ಪಡಿಸುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

3. **ಶ್ರೀಯುತರುಗಳಾದ ಹೆಚ್.ಡಿ.ಕುಮಾರಸ್ವಾಮಿ, ಹೆಚ್.ಡಿ. ರೇವಣ್ಣ, ಎನ್.ಹೆಚ್.ಕೋನರಡ್ಡಿ, ಸಿ.ಎನ್. ಬಾಲಕೃಷ್ಣ ಮತ್ತು ನಾರಾಯಣಗೌಡ ಅವರುಗಳು** ಕರ್ನಾಟಕ ರಾಜ್ಯದ ತೀರ ಹಿಂದುಳಿದ ಪ್ರದೇಶಗಳಾದ ಉತ್ತರ ಕರ್ನಾಟಕ ಹಾಗೂ ಹೈದರಾಬಾದ್ ಕರ್ನಾಟಕ ಪ್ರದೇಶಗಳ ಸಮಗ್ರ ಅಭಿವೃದ್ಧಿಗಾಗಿ ಸರ್ಕಾರವು ಕ್ರಮಕೈಗೊಳ್ಳದಿರುವುದರ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

4. **ಶ್ರೀಯುತರುಗಳಾದ ಜಗದೀಶ್ ಶೆಟ್ಟರ್, ಆರ್. ಅಶೋಕ, ಗೋವಿಂದ ಎಂ. ಕಾರಜೋಳ, ವಿಶ್ವೇಶ್ವರ ಹೆಗಡೆ ಕಾಗೇರಿ, ಎಸ್. ಸುರೇಶ್ ಕುಮಾರ್ ಮತ್ತು ಇತರರು** – ಹೈದರಾಬಾದ್ – ಕರ್ನಾಟಕ ಸಮಗ್ರ ಅಭಿವೃದ್ಧಿಗಾಗಿ ಭಾರತ ಸಂವಿಧಾನದ ಅನುಚ್ಛೇದ 371 (ಜೆ)ಗೆ ತಿದ್ದುಪಡಿ ತಂದು ವಿಶೇಷ ಸ್ಥಾನಮಾನ ನೀಡಿದ್ದರೂ ಸಹ, ಅಲ್ಲಿನ ಜನರಿಗೆ ಅಗತ್ಯ ಸೌಲಭ್ಯ ಸಿಗದಿರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

....5

5. **ಶ್ರೀಯುತರುಗಳಾದ ಎಂ.ಟಿ. ಕೃಷ್ಣಪ್ಪ, ವೈ.ಎಸ್.ವಿ.ದತ್ತಾ, ಕೆ.ಎಂ. ಶಿವಲಿಂಗೇಗೌಡ, ಸಿ.ಎನ್.ಬಾಲಕೃಷ್ಣ, ಎಸ್.ಆರ್. ಶ್ರೀನಿವಾಸ್ ಮತ್ತು ಇತರರು** – ರಾಜ್ಯದಲ್ಲಿ ಕೊಬ್ಬರಿ ಮತ್ತು ತೆಂಗಿನಕಾಯಿ ಬೆಳೆಯ ದರಗಳು ಕನಿಷ್ಟ ಮಟ್ಟಕ್ಕೆ ಕುಸಿದಿರುವುದರಿಂದ ತೆಂಗು ಬೆಳೆಗಾರರು ತೀವ್ರ ಅರ್ಥಿಕ ಸಂಕಷ್ಟದಲ್ಲಿರುವ ವಿಷಯದ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

6. **ಶ್ರೀಯುತರುಗಳಾದ ಜೆ.ಆರ್. ಲೋಬೋ, ಅರಬೈಲ್ ಶಿವರಾಂ ಹೆಬ್ಬಾರ್, ಬಿ.ಎ. ಮೊಹಿದ್ದೀನ ಬಾವ, ಕೆ. ಅಭಯಚಂದ್ರ ಮತ್ತು ಶ್ರೀಮತಿ ಶಕುಂತಲಾ ಟಿ. ಶೆಟ್ಟಿ ಅವರುಗಳು** – ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮ ಮಟ್ಟದಲ್ಲಿ ನಮೂನೆ 9 ಮತ್ತು 11ನ್ನು ನೀಡುವ ಕುರಿತು ಜನ ಸಾಮಾನ್ಯರು ಅನುಭವಿಸುವ ಬವಣೆಯ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

7. **ಶ್ರೀಯುತರುಗಳಾದ ಡಾ||ಕೆ. ಸುಧಾಕರ್, ಕ್ಯಾತಸಂದ್ರ ಎನ್. ರಾಜಣ್ಣ, ಕೆ. ಷಡಕ್ಷರಿ, ಆರ್. ನರೇಂದ್ರ ಹಾಗೂ ಇತರರು** – ಇತ್ತೀಚೆಗೆ ರೂ. 500/– ಮತ್ತು ರೂ. 1000/– ನೋಟುಗಳನ್ನು ರದ್ದುಪಡಿಸಿರುವುದರಿಂದ ರಾಜ್ಯದ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳ ಕಾರ್ಯಗಳು ಸ್ಥಗಿತಗೊಂಡಿದ್ದು, ಇದರಿಂದ ರೈತರ ಸಾಲ ಮರುಪಾವತಿ ಹಾಗೂ ಖಾತೆಯಿಂದ ಹಣವನ್ನು ಪಡೆಯಲು, ಹಾಲು ಉತ್ಪಾದಕರಿಗೆ ಹಣ ಬಟವಾಡೆ ಮಾಡಲು ಹಾಗೂ ಮಹಿಳಾ ಸ್ವ-ಸಹಾಯ ಗುಂಪುಗಳಿಗೆ ಹಣ ವಿತರಣೆಗೆ ತೊಂದರೆ ಉಂಟಾಗಿರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

8. **ಶ್ರೀಯುತರುಗಳಾದ ಬಿ.ಆರ್. ಪಾಟೀಲ್, ಜಾರಕಿಹೊಳಿ ಸತೀಶ್ ಲಕ್ಷ್ಮಣರಾವ್ ಮತ್ತು ಕ್ಯಾತಸಂದ್ರ ಎನ್. ರಾಜಣ್ಣ ಅವರುಗಳು** – ಖ್ಯಾತ ಸಾಹಿತಿ ಹಾಗೂ ಸಂಶೋಧಕರಾಗಿದ್ದ ಎಂ.ಎಂ. ಕಲಬುರಗಿ ಅವರ ಹತ್ಯೆ ನಡೆದು ಒಂದು ವರ್ಷ ಕಳೆದರೂ ಇಲ್ಲಿಯವರೆಗೆ ಹಂತಕರನ್ನು ಹಿಡಿಯಲು ವಿಳಂಬವಾಗಿರುವ ಹಾಗೂ ಪ್ರಕರಣದ ತನಿಖೆಯ ಬೆಳವಣಿಗೆಯ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

....6

9. **ಶ್ರೀಯುತರುಗಳಾದ ಕೆ.ಎಸ್. ಪುಟ್ಟಣ್ಣಯ್ಯ, ಪಿ. ರಾಜೀವ್ ಮತ್ತು ಬಿ.ಆರ್. ಪಾಟೀಲ್ ಅವರುಗಳು** – ರೈತರು ಬೆಳೆದ ಕಬ್ಬಿಗೆ ಹಳೆ ಬಾಕಿ ಹಣವನ್ನು ಪಾವತಿಸದೇ ಇರುವುದು, ಈ ಸಾಲಿನ ಕಬ್ಬಿನ ಬೆಲೆ ನಿಗದಿ ಮಾಡದೇ ಮತ್ತು ಯಾವುದೇ ಸಭೆಯನ್ನೂ ಸಹ ಕರೆಯದಿರುವುದರಿಂದ ರೈತರು ಆತಂಕಕ್ಕೆ ಒಳಗಾಗಿರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

10. **ಶ್ರೀಯುತರುಗಳಾದ ಲಕ್ಷ್ಮಣ ಸಂಗಪ್ಪ ಸವದಿ, ಸಂಜಯ್ ಬಿ. ಪಾಟೀಲ್, ಗೋವಿಂದ ಎಂ. ಕಾರಜೋಳ ಮತ್ತು ವಿಶ್ವೇಶ್ವರ ಹೆಗಡೆ ಕಾಗೇರಿ ಅವರುಗಳು** – ಕೊಪ್ಪಳ ಜಿಲ್ಲೆಯ ಸಣ್ಣ ನೀರಾವರಿ ಇಲಾಖೆಯಲ್ಲಿ ಕಾಮಗಾರಿಗಳನ್ನು ಅನುಷ್ಟಾನಗೊಳಸದೇ ಬಿಲ್ಲುಗಳನ್ನು ಪಾವತಿಸಿ ಸರ್ಕಾರಕ್ಕೆ ಅರ್ಥಿಕ ನಷ್ಟ ಉಂಟು ಮಾಡಿರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

11. **ಶ್ರೀಯುತರುಗಳಾದ ಜಗದೀಶ್ ಶೆಟ್ಟರ್, ಅರವಿಂದ ಚಂದ್ರಕಾಂತ ಬೆಲ್ಲದ್, ಆನಂದ ಅಲಿಯಾಸ್ ವಿಶ್ವನಾಥ ಚಂದ್ರಶೇಖರ ಮಾಮನಿ ಹಾಗೂ ಗುರುಪಾದಗೌಡ ಸಂಗನಗೌಡ ಪಾಟೀಲ್, ಬಿ.ಆರ್. ಯಾವಗಲ್ ಮತ್ತು ದೊಡ್ಡಮನೆ ರಾಮಕೃಷ್ಣ ಸಿದ್ದಲಿಂಗಪ್ಪ ಇತರರು** – ಗದಗ ಜಿಲ್ಲೆಯ ಕಪ್ಪತ್ತಗುಡ್ಡ ಪ್ರದೇಶವನ್ನು "ಸಂರಕ್ಷಿತ ಅರಣ್ಯ ಪ್ರದೇಶ" ದಿಂದ ಕೈಬಿಡುವ ಸರ್ಕಾರದ ಆದೇಶದಿಂದ ಗಣಿಗಾರಿಕೆಗೆ ಅವಕಾಶ ನೀಡಿದಂತಾಗಿ, ಸದರಿ ಪ್ರದೇಶದ ಮೇಲೆ ಪ್ರತಿಕೂಲ ಪರಿಣಾಮ ಬೀರಲಿರುವ ಕುರಿತು ನೀಡಿರುವ ಸೂಚನೆಯ ಮೇಲೆ ಚರ್ಚೆ.

12. **ಶ್ರೀ ಎಂ. ಕೃಷ್ಣಾರೆಡ್ಡಿ ಅವರು** ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ನಗರದ ಸರ್ಕಾರಿ ಮಾಧ್ಯಮಿಕ ಹಿರಿಯ ಬಾಲಕರ ಪ್ರಾಥಮಿಕ ಶಾಲೆಯ ಆವರಣದಲ್ಲಿ ಅಕ್ರಮವಾಗಿ ಖಾಸಗಿ ವಾಣಿಜ್ಯ ಕಟ್ಟಡಗಳನ್ನು ನಿರ್ಮಾಣ ಮಾಡಿರುವ ವಿಷಯದ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

....7

7. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ಶಿವಾನಂದ ಎಸ್. ಪಾಟೀಲ್ ಅವರು** – ICICI Bank ನ ವಿಜಯಪುರ ಶಾಖೆಯಲ್ಲಿ ಸುಮಾರು 100 ಕೋಟಿಗೂ ಹೆಚ್ಚಿನ ಹಣ ದುರುಪಯೋಗದ ಪ್ರಕರಣಕ್ಕೆ ಸಂಬಂಧಿಸಿದಂತೆ ಅಂತಿಮ ಚಾರ್ಜ್‌ಶೀಟ್ ಸಲ್ಲಿಸುವಲ್ಲಿ ಆಗುತ್ತಿರುವ ವಿಳಂಬದ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

2. **ಶ್ರೀ ಶಿವಾನಂದ ಎಸ್. ಪಾಟೀಲ್ ಅವರು** – ವಿಜಯಪುರದಿಂದ ಕೊರ್ತಿ ಕ್ರಾಸ್‌ವರೆಗಿನ ರಸ್ತೆ ಅಗಲೀಕರಣ ಮತ್ತು ಅಭಿವೃದ್ಧಿಪಡಿಸಲು ಆಗುತ್ತಿರುವ ವಿಳಂಬ ಹಾಗೂ ಡೋಣಿ ನದಿ ಸೇತುವೆ ದುರಸ್ಥಿಪಡಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

3. **ಶ್ರೀ ಜೆ.ಟಿ. ಪಾಟೀಲ್ ಅವರು** – ಆಲಮಟ್ಟಿ ಜಲಾಶಯದಲ್ಲಿ ಮುಳುಗಡೆ ಆಗುತ್ತಿರುವ ಭೂಮಿಗಳ ಬೆಲೆಯನ್ನು ನಿರ್ಧರಿಸಲು ಸಮಿತಿ ರಚಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

4. **ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರರಾವ್ ನಾಡಗೌಡ ಅವರು** – ಕೃಷ್ಣಾ ನದಿ ದಂಡೆಯಲ್ಲಿರುವ ರಕ್ಕಸಗಿ ಹಾಗೂ ಬಲದಿನ್ನಿ ಗ್ರಾಮಗಳಿಗೆ ನೀರಿನ ಸೌಲಭ್ಯ ಕಲ್ಪಿಸುವ ಸಲುವಾಗಿ ಡಿಸ್ಟ್ರಿಬ್ಯೂಟರಿ ಹಾಗೂ ಸಬ್ ಲ್ಯಾಟರಲ್‌ಗಳನ್ನು ನಿರ್ಮಿಸುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

5. **ಶ್ರೀ ಕೆ.ಬಿ. ಪ್ರಸನ್ನ ಕುಮಾರ್ ಅವರು** – ಶಿವಮೊಗ್ಗ ನಗರದ ಬಿ.ಹೆಚ್. ರಸ್ತೆಯಿಂದ ಹೊಳೆಹೊನ್ನೂರು ರಸ್ತೆಯಲ್ಲಿರುವ ರೈಲ್ವೆ ಕ್ರಾಸ್ ಗೇಟ್ ಹಾಕಿದ ಸಂದರ್ಭದಲ್ಲಿ ಆಗುತ್ತಿರುವ ಟ್ರಾಫಿಕ್ ಜಾಮ್‌ನಿಂದ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವರ ಗಮನ ಸೆಳೆಯುವುದು.

....8

6. **ಶ್ರೀ ಪಿ.ಆರ್. ಸುಧಾಕರ್ ಲಾಲ್ ಅವರು** – ಕೊರಟಗೆರೆ ತಾಲ್ಲೂಕಿನ ದಾಸರಹಳ್ಳಿ ಗ್ರಾಮದ ಬಂಡೆ ಕಾರ್ಮಿಕರ ಮಕ್ಕಳ ಟೆಂಟ್ ಶಾಲೆಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸದಿರುವುದರಿಂದ ತೊಂದರೆಯಾಗಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

7. **ಶ್ರೀ ಸಿ.ಎನ್. ಬಾಲಕೃಷ್ಣ ಅವರು** – ಹಾಸನ ಜಿಲ್ಲೆ, ಚನ್ನರಾಯಪಟ್ಟಣ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

8. **ಶ್ರೀ ವೈ.ಎ. ನಾರಾಯಣಸ್ವಾಮಿ ಅವರು** –ಹೆಬ್ಬಾಳ ವಿಧಾನಸಭಾ ಕ್ಷೇತ್ರದಲ್ಲಿ ರೈಲ್ವೆ ಮಾರ್ಗ ಹಾದುಹೋಗುತ್ತಿದ್ದು, ಸಂಚಾರ ದಟ್ಟಣೆಯು ಹೆಚ್ಚಾಗಿರುವುದರಿಂದ ರೈಲ್ವೆ ಮೇಲು ಸೇತುವೆ / ರೈಲ್ವೆ ಕೆಳ ಸೇತುವೆ (RUB/ROB) ಯನ್ನು ನಿರ್ಮಿಸುವ ಬಗ್ಗೆ ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಗಮನ ಸೆಳೆಯುವುದು.

9. **ಡಾ|| ಸಿ.ಎನ್. ಅಶ್ವಥ ನಾರಾಯಣ ಅವರು** – ಸಿ.ಎ ನಿವೇಶನ ಹಂಚಿಕೆ ನಿಯಮಗಳನ್ನು ಉಲ್ಲಂಘಿಸಿ ಬಿ.ಡಿ.ಎ. ವತಿಯಿಂದ ಪೂರ್ವಾಂಕರ ಸಂಸ್ಥೆಗೆ ಬಹುಮಹಡಿ ವಾಹನ ನಿಲ್ದಾಣ ನಿಲುಗಡೆಗೆ ಅನುಮತಿ ನೀಡಿರುವ ಬಗ್ಗೆ ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಗಮನ ಸೆಳೆಯುವುದು.

10. **ಶ್ರೀ ಎಂ.ಟಿ. ಕೃಷ್ಣಪ್ಪ ಅವರು** – ತುರುವೇಕೆರೆ ಪಟ್ಟಣದಲ್ಲಿ ಕಾಂಪ್ಲೆಕ್ಸ್ ನಿರ್ಮಾಣ ಕಾಮಗಾರಿ ಪ್ರಾರಂಭವಾಗಿ ೮ ವರ್ಷಗಳು ಕಳೆದರೂ ಪೂರ್ಣಗೊಳಸದಿರುವ ಬಗ್ಗೆ ಮಾನ್ಯ ಪೌರಾಡಳಿತ ಹಾಗೂ ಸಾರ್ವಜನಿಕ ಉದ್ಯಮಗಳ ರಾಜ್ಯ ಸಚಿವರ ಗಮನ ಸೆಳೆಯುವುದು.

11. **ಶ್ರೀ ಗುರುಪಾಟೀಲ್ ಶಿರವಾಳ್ ಮತ್ತು ಶ್ರೀ ಯು.ಬಿ. ಬಣಕಾರ ಅವರುಗಳು** – ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಶ್ರೀ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮ, ಶ್ರೀ ಬಿ.ಆರ್. ಅಂಬೇಡ್ಕರ್ ನಿಗಮ ಹಾಗೂ ಶ್ರೀ ದೇವರಾಜ್ ಅರಸು ಅಭಿವೃದ್ಧಿ ನಿಗಮದ ಸಾಲ ನೀಡುವ ಯೋಜನೆಗಳ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

12. **ಶ್ರೀ ಕೆ.ಎಂ. ಶಿವಲಿಂಗೇಗೌಡ ಅವರು** – ಪರಿಶಿಷ್ಟ ಜಾತಿ / ಪರಿಶಿಷ್ಟ ವರ್ಗಗಳ ಮತ್ತು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಗಳ ವತಿಯಿಂದ ಈ ಹಿಂದೆ ನೀಡಲಾಗುತ್ತಿದ್ದ, ನೇರ ಸಾಲ ಸೌಲಭ್ಯ ಪದ್ಧತಿ ಕೈಬಿಟ್ಟು ಬ್ಯಾಂಕ್‌ಗಳ ಮುಖಾಂತರ ಸಾಲ ನೀಡುವ ವ್ಯವಸ್ಥೆಯಿಂದಾಗಿ ಅರ್ಹ ಫಲಾನುಭವಿಗಳಿಗೆ ಇಲಾಖಾ ಸೌಲಭ್ಯಗಳು ದೊರೆಯದಿರುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

13. **ಕ್ಯಾತಸಂದ್ರ ಎನ್. ರಾಜಣ್ಣ ಅವರು** – ಮಧುಗಿರಿ ತಾಲ್ಲೂಕು, ಹೊಸಕೆರೆ ಗ್ರಾಮದ ಪ್ರಾಥಮಿಕ ಶಾಲೆಯ ಮೇಲ್ಛಾವಣಿ ಕುಸಿದು ಮಕ್ಕಳು ತೀವ್ರ ಗಾಯಗೊಂಡಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

14. **ಶ್ರೀ ಜಿ.ಹೆಚ್. ಶ್ರೀನಿವಾಸ್ ಅವರು** – ತರೀಕೆರೆಯ ಸರ್ಕಾರಿ ಐ.ಟಿ.ಐ. ಕಾಲೇಜಿನ ಕಟ್ಟಡಕ್ಕೆ ಹಣ ಮಂಜೂರಾಗಿದ್ದರೂ ಕಳೆದ 5 ವರ್ಷಗಳಿಂದ ರೈಟ್ಸ್ ಕಂಪನಿಯವರು ಕಾಮಗಾರಿಯನ್ನು ಆರಂಭಿಸದಿರುವ ಬಗ್ಗೆ ಮಾನ್ಯ ಕಾರ್ಮಿಕ ಸಚಿವರ ಗಮನ ಸೆಳೆಯುವುದು.

....10

15. **ಶ್ರೀ ಎಂ. ಕೃಷ್ಣಾರೆಡ್ಡಿ ಅವರು** – ಚಿಂತಾಮಣಿ ತಾಲ್ಲೂಕಿನ, ಕಸಬಾ ಹೋಬಳಿ ಕನಂಪಲ್ಲಿ ಗ್ರಾಮದ ಸರ್ವೆ ನಂ.11ರಲ್ಲಿರುವ ಒಂದು ಎಕರೆ 25 ಗುಂಟೆ ಸರ್ಕಾರಿ ಹುಲ್ಲು ಬನ್ನಿ ಖರಾಬು ಜಮೀನನ್ನು ಈತನಕ ಸ್ವಾಧೀನ ಪಡಿಸಿಕೊಂಡಿರುವುದಿಲ್ಲ ಹಾಗೂ ಸದರಿ ಜಮೀನಿನಲ್ಲಿ ನಿವೇಶನಗಳನ್ನು ಖರೀದಿಸಿರುವ ಸರ್ಕಾರಿ ನೌಕರರು ನಿವೇಶನ ಕಳೆದುಕೊಂಡು ತೊಂದರೆಯಲ್ಲಿರುವುದರ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

16. **ಶ್ರೀ ಎಂ.ಕೃಷ್ಣಪ್ಪ (ಬೆಂಗಳೂರು ದಕ್ಷಿಣ)** – ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರದ ಜಿಗಣಿ ಕೈಗಾರಿಕಾ ಪ್ರದೇಶಕ್ಕೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರ ಗಮನ ಸೆಳೆಯುವುದು.

17. **ಶ್ರೀ ಸಿ.ಟಿ. ರವಿ ಅವರು** – ಗುತ್ತಿಗೆ ಆಧಾರದ ಮೇಲೆ ಸೇವೆ ಸಲ್ಲಿಸುತ್ತಿರುವ ಸಾವಿರಾರು ವೈದ್ಯರು, ಅರೆ ವೈದ್ಯಕೀಯ ಸಿಬ್ಬಂದಿಗಳನ್ನು ಖಾಯಂಗೊಳಿಸುವುದು, ಖಾಲಿಯಿರುವ ಎಲ್ಲಾ ಹುದ್ದೆಗಳನ್ನು ಭರ್ತಿ ಮಾಡುವುದು ಹಾಗೂ ನಿಯಮಗಳನ್ನು ಸರಳೀಕರಿಸುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

18. **ಶ್ರೀ ನಾರಾಯಣಸ್ವಾಮಿ ಎಸ್.ಎನ್. ಅವರು** – ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಶಾಶ್ವತ ನೀರಾವರಿ ಯೋಜನೆಯನ್ನು ಕಲ್ಪಿಸುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

19. **ಶ್ರೀ ಬಿ.ಆರ್. ಯಾವಗಲ್ ಮತ್ತು ಶ್ರೀ ಗುರುಪಾದಗೌಡ ಸಂಗನಗೌಡ ಪಾಟೀಲ್ ಅವರುಗಳು** – ಮಲಪ್ರಭಾ ನೀರಾವರಿ ಯೋಜನೆಯ ಕಾಲುವೆಗಳನ್ನು ಅಧುನೀಕರಣಗೊಳಿಸುವ ಕಾಮಗಾರಿಗಳನ್ನು ಪ್ರಾರಂಭಿಸುವಲ್ಲಿ ಆಗುತ್ತಿರುವ ವಿಳಂಬದ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸಚಿವರ ಸೆಳೆಯುವುದು.

....11

20. **ಶ್ರೀ ಪಿ. ರಾಜೀವ್ ಅವರು** – ವಿವಿಧ ವಸತಿ ಯೋಜನೆಗಳಡಿಯಲ್ಲಿ ಮಂಜೂರಾಗಿರುವ ಮನೆಗಳಲ್ಲಿ ಬಹಳಷ್ಟು ಮನೆಗಳು **'Not–ok'** ಆಗಿದ್ದು, ಫಲಾನುಭವಿಗಳಿಗೆ ಹಣ ಬಿಡುಗಡೆಯಾಗದಿರುವ ಬಗ್ಗೆ ಮಾನ್ಯ ವಸತಿ ಸಚಿವರ ಗಮನ ಸೆಳೆಯುವುದು.

21. **ಶ್ರೀ ಗುರುಪಾಟೀಲ್ ಶಿರವಾಳ ಅವರು** – ನಗರಾಭಿವೃದ್ಧಿ ಪ್ರಾಧಿಕಾರಗಳ ಮತ್ತು ಯೋಜನಾ ಪ್ರಾಧಿಕಾರದ ಸಂಸ್ಥೆಗಳಲ್ಲಿ ಈಗಾಗಲೇ ಖಾತೆ ತೆರೆದಿರುವ ನಿವೇಶನಗಳಿಗೆ ಕಟ್ಟಡ ಪರವಾನಿಗೆ ನೀಡುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರ ಗಮನ ಸೆಳೆಯುವುದು.

22. **ಶ್ರೀ ಸಾ.ರಾ. ಮಹೇಶ್ ಅವರು** – ಲೋಕೋಪಯೋಗಿ ಇಲಾಖೆಯಲ್ಲಿ ಸಿ.ಆರ್.ಎಫ್ ಅನುದಾನವನ್ನು ಬಿಡುಗಡೆಗೊಳಿಸುವಲ್ಲಿ ತಾರತಮ್ಯವೆಸಗುತ್ತಿರುವುದರಿಂದ ಅಭಿವೃದ್ಧಿ ಕಾಮಗಾರಿಗಳು ಕುಂಠಿತಗೊಂಡಿರುವ ಬಗ್ಗೆ ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

23. **ಶ್ರೀಯುತರುಗಳಾದ ಹೆಚ್.ಕೆ. ಕುಮಾರಸ್ವಾಮಿ, ಸಾ.ರಾ. ಮಹೇಶ್, ಹೆಚ್.ಎಸ್. ಪ್ರಕಾಶ್, ಸಿ.ಎನ್. ಬಾಲಕೃಷ್ಣ ಮತ್ತು ಕೆ.ಎಂ. ಶಿವಲಿಂಗೇಗೌಡ ಅವರುಗಳು** – ಹಾಸನ ಜಿಲ್ಲೆಯಲ್ಲಿ ಕೊಣನೂರು ಗ್ರಾಮ ಪಂಚಾಯ್ತಿಯನ್ನೊಳಗೊಂಡಂತೆ 2016ರಲ್ಲಿ ಮುಕ್ತಾಯವಾಗುವ ಗ್ರಾಮಪಂಚಾಯ್ತಿಗಳಿಗೆ ಅಧ್ಯಕ್ಷ / ಉಪಾಧ್ಯಕ್ಷರ ಚುನಾವಣೆ ನಡೆಸಲು ಆದೇಶವಾಗಿದ್ದರೂ ಸಹ ಉದ್ದೇಶ ಪೂರ್ವಕವಾಗಿ ನಿಗದಿತ ಅವಧಿಯೊಳಗೆ ಚುನಾವಣೆಯನ್ನು ನಡೆಸದೇ, ಕಾನೂನು ಉಲ್ಲಂಘಿಸಿರುವ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ಸೂಕ್ತ ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

24. **ಶ್ರೀ ಎನ್. ಚೆಲುವರಾಯಸ್ವಾಮಿ ಅವರು** – ಹುಬ್ಬಳ್ಳಿ – ಬೆಳಗಾಂ ಹೆದ್ದಾರಿಯನ್ನು ಚತುಷ್ಪಥ ರಸ್ತೆಯನ್ನಾಗಿ ಪರಿವರ್ತಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

....12

25. **ಕೆ.ಎಸ್. ಪುಟ್ಟಣ್ಣಯ್ಯ ಅವರು –** ಮೈಸೂರು ಮತ್ತು ಮಂಡ್ಯ ಜಿಲ್ಲೆಯ ರೈತರ ಸಾಕು ಪ್ರಾಣಿಗಳಿಗೆ ಕುಡಿಯುವ ನೀರಿಗಾಗಿ, ಮೇವಿನ ದೃಷ್ಟಿಯಿಂದ ಹಾಗೂ ಈಗಾಗಲೇ ಬಂದಿರುವ ಬೆಳೆಗಳನ್ನು ಉಳಿಸಿಕೊಳ್ಳಲು ಕಾವೇರಿ ನದಿಯ ನೀರನ್ನು ಕನಿಷ್ಠ 5 ದಿನ ನಾಲೆಗಳಿಗೆ ಹರಿಸುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

26. **ಶ್ರೀ ಆರ್. ಅಶೋಕ್ ಅವರು –** ಬೆಂಗಳೂರು ನಗರದಲ್ಲಿ ಸಾರ್ವಜನಿಕರ ಪ್ರತಿರೋಧ ಪರಿಗಣಿಸಿ 'ಸ್ಟೀಲ್ ಬ್ರಿಡ್ಜ್' ಯೋಜನೆಯನ್ನು ಕೈಬಿಡುವ ಬಗ್ಗೆ ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಗಮನ ಸೆಳೆಯುವುದು.

27. **ಶ್ರೀ ವಿಶ್ವನಾಥ್ ಈ. ಪಾಟೀಲ್ ಅವರು –** ಬೆಳಗಾವಿಯ ಮಾಹೇಶ್ವರಿ ಅಂಧ ಮಕ್ಕಳ ಶಾಲೆಗೆ ಬಾಕಿ ಇರುವ ಅನುದಾನವನ್ನು ತಕ್ಷಣವೇ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

28. **ಶ್ರೀ ಕೆ. ಶಿವಮೂರ್ತಿ ಅವರು** – ಶಿಕ್ಷಣ ಇಲಾಖೆಯ ಪರಿಶಿಷ್ಟ ಜಾತಿಯ ವಿದ್ಯಾ ಸಂಸ್ಥೆಗಳಿಗೆ ಅನುದಾನ ಬಿಡುಗಡೆ ಮಾಡದಿರುವುದರಿಂದ ಉಂಟಾಗಿರುವ ಗಂಭೀರ ಪರಿಸ್ಥಿತಿಯ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

29. **ಶ್ರೀ ಎನ್.ಹೆಚ್. ಕೋನರಡ್ಡಿ ಅವರು** – ಸರ್ಕಾರದ ವತಿಯಿಂದ ಈರುಳ್ಳಿ ಖರೀದಿ ಕೇಂದ್ರದ ಅವಧಿಯನ್ನು ದಿನಾಂಕ: 31.12.2016 ರವರೆಗೆ ವಿಸ್ತರಿಸುವ ಬಗ್ಗೆ ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

30. **ಶ್ರೀ ಹೆಚ್.ಡಿ. ರೇವಣ್ಣ ಅವರು** – ಹೊಳೆನರಸೀಪುರ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದ ಹಲವಾರು ಮತಗಟ್ಟೆ ಅಧಿಕಾರಿಗಳು ಮತದಾರರ ಪಟ್ಟಿಯಲ್ಲಿ ಉದ್ದೇಶ ಪೂರ್ವಕವಾಗಿ ಹೆಸರುಗಳನ್ನು ತೆಗೆದು ಹಾಕುವುದಲ್ಲದೆ, ಬೇರೆ ಸ್ಥಳಗಳಲ್ಲಿರುವ ತಮಗೆ ಬೇಕಾದವರ ಹೆಸರುಗಳನ್ನು ಸೇರ್ಪಡೆಗೊಳಿಸುತ್ತಿರುವುದರಿಂದ ಮತದಾರರಿಗೆ ತೊಂದರೆಯುಂಟಾಗಿದ್ದು, ಇದಕ್ಕೆ ಕಾರಣರಾದವರ ಮೇಲೆ ನಿಯಮಾನುಸಾರ ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

....13

31. **ಶ್ರೀಯುತರುಗಳಾದ ಬಿ.ಬಿ. ನಿಂಗಯ್ಯ, ಬಿ.ಆರ್. ಪಾಟೀಲ್, ಎಸ್. ಸುರೇಶ್ ಕುಮಾರ್, ಕೆ.ಎಸ್. ಪುಟ್ಟಣ್ಣಯ್ಯ, ಕ್ಯಾತಸಂದ್ರ ಎನ್. ರಾಜಣ್ಣ ಮತ್ತು ಇತರರು** – ಅಭಿವೃದ್ಧಿ ಹೊಂದುತ್ತಿರುವ ನಮ್ಮ ದೇಶದಲ್ಲಿ ಮಹಾಮಹಿಮರ, ರಾಷ್ಟ್ರನಾಯಕರ ಹೆಸರಿನಲ್ಲಿ ಜಯಂತಿಗಳನ್ನು ಆಚರಿಸುವ ಸಂದರ್ಭದಲ್ಲಿ ಸರ್ಕಾರಿ ರಜೆಯನ್ನು ಘೋಷಿಸುವುದರ ಅವಶ್ಯಕತೆಯ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

32. **ಶ್ರೀ ಗೋವಿಂದ ಎಂ. ಕಾರಜೋಳ ಅವರು** – ಹೆಚ್ಚಿನ ಸಂಖ್ಯೆಯಲ್ಲಿ ಕ್ರೀಡಾ ಪಟುಗಳು ಇರುವ ಮುಧೋಳ ನಗರದಲ್ಲಿ ಕ್ರೀಡಾ ಹಾಸ್ಟೆಲ್ ಮಂಜೂರು ಮಾಡುವುದು ಮತ್ತು ಕೋಚ್ ನೇಮಕ ಮಾಡುವ ಬಗ್ಗೆ ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರ ಗಮನ ಸೆಳೆಯುವುದು.

33. **ಶ್ರೀ ಬಿ.ಬಿ. ನಿಂಗಯ್ಯ ಅವರು** – ರಾಜ್ಯದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ, ಪದವಿ ಪೂರ್ವ ಕಾಲೇಜುಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದ 180ಕ್ಕೂ ಹೆಚ್ಚು ಉಪನ್ಯಾಸಕರುಗಳನ್ನು ಕೆಲಸದಿಂದ ತೆಗೆದು ಹಾಕಿರುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

34. **ಶ್ರೀಯುತರುಗಳಾದ ಎಂ.ಟಿ.ಕೃಷ್ಣಪ್ಪ, ವೈ.ಎಸ್.ವಿ.ದತ್ತಾ, ಎನ್.ಹೆಚ್. ಕೋನರಡ್ಡಿ ಮತ್ತು ಎಂ.ಕೃಷ್ಣಾರೆಡ್ಡಿ ಅವರು** – ದಿನಾಂಕ:21.10.2016 ರಂದು ಬೆಂಗಳೂರಿನ ವಿಧಾನಸೌಧದ ಪಶ್ಚಿಮ ದ್ವಾರದ ಮೂಲಕ ವಕೀಲರೊಬ್ಬರು ವಾಹನ ಸಂಖ್ಯೆ:ಕೆಎ-04-ಎಂಎಂ-9018ರಲ್ಲಿ ಭಾರಿ ಮೊತ್ತದ ಹಣವನ್ನು ಸಾಗಿಸುತ್ತಿದ್ದ ಪ್ರಕರಣವನ್ನು ಮುಚ್ಚಿ ಹಾಕಲು ಪ್ರಯತ್ನಿಸುತ್ತಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

35. **ಶ್ರೀ ಪ್ರತಾಪಗೌಡ ಪಾಟೀಲ್ ಅವರು** – ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿಯ ಮತ್ತು ಬೀದರಿನ ಕಲ್ಯಾಣ ಪತ್ತಿನ ಸೌಹಾರ್ದ ಅಧ್ಯಕ್ಷರು ನಕಲಿ ದಾಖಲೆಗಳನ್ನು ಸೃಷ್ಟಿಸಿ ಸಾರ್ವಜನಿಕರಿಗೆ ವಂಚಿಸುತ್ತಿರುವ ವಿಷಯದ ಬಗ್ಗೆ ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರ ಗಮನ ಸೆಳೆಯುವುದು.

....14

೮. ಅರ್ಧ ಗಂಟೆ ಕಾಲಾವಧಿ ಚರ್ಚೆ

1. **ಶ್ರೀ ಬಸವರಾಜ ಎಸ್. ಬೊಮ್ಮಾಯಿ ಅವರು** – 'ಕೆ.ಯು.ಡಬ್ಲ್ಯೂ.ಎಸ್ ಅಂಡ್ ಡಿ.ಬಿ.ಯಿಂದ ಕೈಗೊಂಡಿರುವ ಕಾಮಗಾರಿಗಳ' ಬಗ್ಗೆ ದಿನಾಂಕ: 29.11.2016 ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ 7ನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 94(೮07)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.
2. **ಶ್ರೀ ಜೆ.ಟಿ. ಪಾಟೀಲ್ ಅವರು** – "ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ 'E-trading'ನ್ನು ಸಮರ್ಪಕವಾಗಿ ಅನುಷ್ಠಾನಗೊಳಸಿ ರೈತರಿಗೆ ಸಕಾಲದಲ್ಲಿ 'E-payment' ಜಾರಿ ಮಾಡುವ ಬಗ್ಗೆ" ದಿನಾಂಕ: 25.11.2016ರ ಗಮನ ಸೆಳೆಯುವ ಸೂಚನೆಯಲ್ಲಿ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.
3. **ಶ್ರೀ ಕೆ.ಎಸ್. ಮಂಜುನಾಥಗೌಡ ಅವರು** – "ಶಾಲಾ – ಕಾಲೇಜುಗಳ ಕಟ್ಟಡಗಳ ದುರಸ್ಥಿ" ಬಗ್ಗೆ ದಿನಾಂಕ: 30.11.2016 ರಂದು ಸದನದಲ್ಲಿ ಉತ್ತರಿಸುವ ೮ನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 119(1451)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.
4. **ಶ್ರೀ ಎನ್. ಚೆಲುವರಾಯಸ್ವಾಮಿ ಅವರು** – "ಸೌರ ವಿದ್ಯುತ್ ಘಟಕಗಳ ಸ್ಥಾಪನೆ" ಬಗ್ಗೆ ದಿನಾಂಕ: 25.11.2016 ರಂದು ಸದನದಲ್ಲಿ ಉತ್ತರಿಸುವ 5ನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:61(1049)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧಗಂಟೆ ಕಾಲ ಚರ್ಚಿಸುವುದು
5. **ಶ್ರೀ ಹೆಚ್.ಕೆ. ಕುಮಾರಸ್ವಾಮಿ ಅವರು** – "ಹಾಸನ ಜಿಲ್ಲೆ ಸಕಲೇಶಪುರ ಮತ್ತು ಆಲೂರು ತಾಲ್ಲೂಕಿನಲ್ಲಿ ಆನೆ ದಾಳಗೊಳಗಾದವರಿಗೆ ಪರಿಹಾರ ನೀಡುವ ಬಗ್ಗೆ ಹಾಗೂ ಆನೆ ಕಾರಿಡಾರ್ ಸ್ಥಾಪನೆ ಬಗ್ಗೆ" ದಿನಾಂಕ: 30.11.2016 ರಂದು ಗಮನ ಸೆಳೆಯುವ ಸೂಚನೆಯಲ್ಲಿ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧಗಂಟೆ ಕಾಲ ಚರ್ಚಿಸುವುದು.

೯. ಖಾಸಗಿ ಸದಸ್ಯರ ಕಾರ್ಯಕಲಾಪಗಳು

I. ನಿರ್ಣಯ

ಅ) ಶ್ರೀ ಕೆ. ಗೋಪಾಲಯ್ಯ ಅವರು ಕೆಳಕಂಡ ನಿರ್ಣಯವನ್ನು ಮಂಡಿಸುವುದು.

"೨೮೦೦ಕ್ಕಿಂತ ಹೆಚ್ಚು ವರ್ಷಗಳ ಇತಿಹಾಸ ಹೊಂದಿರುವ ತುಳು ಭಾಷೆಯನ್ನು ಸಂವಿಧಾನದ ಎಂಟನೇ ಪರಿಚ್ಛೇದದಲ್ಲಿ ಸೇರಿಸಲು ಕೇಂದ್ರ ಸರ್ಕಾರದ ಮೇಲೆ ಒತ್ತಡ ತರುವ ಬಗ್ಗೆ" ಈ ಸದನವು ಸರ್ಕಾರವನ್ನು ಒತ್ತಾಯಿಸುತ್ತದೆ.

ಆ) ಶ್ರೀ ಕೆ.ಎಸ್. ಪುಟ್ಟಣ್ಣಯ್ಯ ಅವರು ಕೆಳಕಂಡ ನಿರ್ಣಯವನ್ನು ಮಂಡಿಸುವುದು.

"ಸತತವಾದ ಬರದಿಂದ ಕಂಗೆಟ್ಟಿರುವ ರಾಜ್ಯದ ರೈತರ, ಕೃಷಿ ಕಾರ್ಮಿಕರ ಮತ್ತು ಗ್ರಾಮೀಣ ಭಾಗದ ಸ್ವಸಹಾಯ ಸಂಘಗಳ ಸಹಕಾರಿ ಮತ್ತು ರಾಷ್ಟ್ರೀಕೃತ ಬ್ಯಾಂಕುಗಳು ಮತ್ತು ವಿವಿಧ ನಿಗಮ ಮಂಡಳಿಗಳಿಂದ ಪಡೆದ ಸಾಲವನ್ನು ಸಂಪೂರ್ಣ ಮನ್ನಾ ಮಾಡುವುದು, ಬೆಳೆಗಳಿಗೆ ಕೃಷಿ ಬೆಲೆ ನಿಗದಿ ಆಯೋಗ ಲೆಕ್ಕ ಹಾಕಿರುವ ಖರ್ಚು ಮತ್ತು ಅದರ ಮೇಲೆ ರಾಷ್ಟ್ರೀಯ ರೈತ ಆಯೋಗದ ಶಿಫಾರಸ್ಸಿನಂತೆ ವೈಜ್ಞಾನಿಕ ಪರಿಹಾರ ಕೊಡುವುದು ಹಾಗೂ ೨೦೦೯ರ ಕೇಂದ್ರ ಸರ್ಕಾರದ 'ರಾಷ್ಟ್ರೀಯ ಬರ ನಿರ್ವಹಣೆ ಮಾರ್ಗಸೂಚಿ'ಯನ್ವಯ ಬರ ನಿರ್ವಹಣೆ ಮಾಡುವುದು ಈ ಮೂರು ಸೇರಿದಂತೆ ವಿಶೇಷ ಪ್ಯಾಕೇಜ್‌ನ ಒಟ್ಟು ಅರ್ಥಿಕ ಜವಾಬ್ದಾರಿಯಲ್ಲಿ ಶೇಕಡ ೩೫ ರಷ್ಟು ರಾಜ್ಯ ಸರ್ಕಾರವು ವಹಿಸಿಕೊಳ್ಳಬೇಕೆಂದು ಮತ್ತು ಶೇಕಡ ೬೫ರಷ್ಟನ್ನು ಕೇಂದ್ರ ಸರ್ಕಾರ ನೀಡಬೇಕೆಂದು ಒತ್ತಾಯಿಸುವ ಬಗ್ಗೆ " ಈ ಸದನವು ಸರ್ಕಾರವನ್ನು ಒತ್ತಾಯಿಸುತ್ತದೆ.

....16

II. ಖಾಸಗಿ ಸದಸ್ಯರ ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಶ್ರೀ ಕೆ. ಶಿವಮೂರ್ತಿ (ವಿಧಾನ ಸಭಾ ಸದಸ್ಯರು) ಅವರು:-

ಅ) 2015ನೇ ಸಾಲಿನ ಕರ್ನಾಟಕ ಭೂ ಕಂದಾಯ (ಖಾಸಗಿ ಸದಸ್ಯರ ತಿದ್ದುಪಡಿ) ವಿಧೇಯಕವನ್ನು (2015ರ ಖಾಸಗಿ ಸದಸ್ಯರ ವಿಧೇಯಕ-02) ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಎಸ್.ಮೂರ್ತಿ
ಕಾರ್ಯದರ್ಶಿ (I/C)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm